ಸದರೀ ದರಖಾಸ್ತುದಾರರಾದ ವೋಟುಗಾನಹಳ್ಳಿ ಗಂಗಪ್ಪನವರ ಅರ್ಜಿಯನ್ನ 1891ನೇ ಇಸವಿ ಜನವರಿ ತಿಂಗಳು ತಾರೀಖು 23ರಲ್ಲಿ ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ವೋಟುಗಾನ ಹಳ್ಳಿ ಚನ್ನಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1890ನೇ ಇಸವಿ ನವಂಬರ್ ತಿಂಗಳು 26ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

1890ನೇ ಇಸವಿ ಅರ್ಜೀ ನಂಬರ್ 188.

ಮೃತಪಟ್ಟ ಕೃಷ್ಣಗಿರಿಯಿಂದ ಬೆಂಗಳೂರಿಗೆ ಬಂದಿರುವ ಮಾಸ್ತೀ ಮುನಿಶಾಮಿ ಶೆಟ್ಟಿಯ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಪೆದ್ದಸಾಮಿಶೆಟ್ಟಿ ಮೃತಪಟ್ಟ ಸದರೀ ಮಾಸ್ತೀ ಮುನಿಶಾಮಿಶೆಟ್ಟಿಗೆ ವಿಭಕ್ತ ತಮ್ಮ ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ಸ್ಥಳದ ಪೆದ್ದಸಾಮಿಶೆಟ್ಟಿಯು ಬೆಂಗಳೂರು ವಾಸಸ್ಥನಾಗಿ ಮೃತಪಟ್ಟ ಮಾಸ್ತೀ ಮುನಿಶಾಮಿಶೆಟ್ಟರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲಗಳನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಪೆದ್ದಸಾಮಿಶೆಟ್ಟರ ಅರ್ಜಿಯನ್ನ 1891ನೇ ಇಸವಿ ಜನವರಿ ತಿಂಗಳು ತಾರೀಖು 23ರಲ್ಲಿ ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಮಾಸ್ತೀ ಮುನಿಶಾಮಿಶೆಟ್ಟರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1890ನೇ ಇಸವಿ ನವಂಬರ್ ತಿಂಗಳು 27ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಟಿ. ನರಹರಿರಾವ್,
ಡಿಸ್ಟ್ರಿಕ್ಟ್ ಜಡ್ಜ್.

ಇಸ್ತಿಹಾರ್‌ನಾಮಾ.

ತಾರೀಖು 26—11—90.

ಇದರಿಂದ ಸಮಸ್ತ ಜನರಿಗೂ ತಿಳಿಯಪಡಿಸುವದೇನಂದರೆ,—ಕೋಲಾರ್ ತಾಲ್ಲೂಕು ಸ್ಟೇಟ್ ಫಾರೆಸ್ಟಿನ ಹುಣಸೆ, ಹೊಂಗೆ, ೀಗೆ 1890—91ನೇ ಸಾಲಿನ ಫಸಲ್ ಕೋಲಾರ್ ತಾಲ್ಲೂಕು ಆಮಿಲರಿಂದ ಈ ಕೆಳಗೆ ನಮೂದಾಗುವ ಸ್ಥಳ ಮತ್ತು ತಾರೀಖುಗಳಲ್ಲಿ ಹರಾಜು ಮಾಡಲ್ಪಡುತ್ತೆ.

ಫಾರೆಸ್ಟು ಹೆಸರು.	ಹರಾಜು ತಾರೀಖು.	ಯಾವ ಸ್ಥಳದಲ್ಲಿ ಹರಾಜು.
1 ಕುಂಬಳಗೋಡು ..	5ನೇ ಜನವರಿ 1891	ಬಿಡದಿ
2 ಹುಲತ್ತಾರ ..	ಡಿಟೋ	ಡಿಟೋ
3 ಅಜ್ಜಲ್	6 ಮತ್ತು 7ನೇ ಡಿಟೋ	ಕೋಲಾರ್
4 ಮಣಿಗುಡ್ಡೆ		
5 ಹಂದಿಗೊಂದಿ		
6 ಮಾಕಳಿ		
7 ತೆಂಗ್ನಕಲ್ಲು ..	8ನೇ ಡಿಟೋ	ಚನ್ನಪಟ್ಣ

ಹರಾಜಿನ ಷರತ್ತುಗಳು—ಈ ಹರಾಜು ಡೆಪ್ಯೂಟಿ ಕಮ್ಮಿಷನರ್ ಸಾಹೆಬರವರ ಮಂಜೂರಾತಿಗೆ ವಳಪಟ್ಟಿರುತ್ತೆ.

ಸಿ. ನಾರಾಯಣರಾವ್,
ಅಸಿಸ್ಟೆಂಟ್ ಕಂಸರ್ವೇಟರ್ ಆಫ್ ಫಾರೆಸ್ಟ್ಸ್.

ಬೆಂಳೂರು ಡಿಸ್ಟ್ರಿಕ್ಟು.

ತಾರೀಖು 20ನೇ ನವಂಬರ್ 1890.

ನಂ. 1. ಸಕಲ ಜನಗಳಿಗೂ ತಿಳಿಯುವ ಬಗ್ಯೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಜೋಡೀದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸಮಾಧಾನಕ್ಕೋಸ್ಕರ ಕ್ರಮ ಪ್ರಕಾರ ಜಪ್ತೀ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡೀ ಗ್ರಾಮಗಳು ಇದರಡಿ ಕಂಡ ತಖ್ತೆಯಲ್ಲಿ ನಮೂದಿರುವ ಸ್ಥಳದಲ್ಲೂ ವ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಯೆ 11 ಘಂಟೆಗೆ ಹರಾಜು ಪುರುವಾಗಿ ಉಳಿಕೆ ಯಾವದೂ ಇಲ್ಲದೆ ಗ್ರಾಮವು ಚಿಡ ದರಖಾಸ್ತುದಾರರಿಗೆ ಹರಾಜು ನಿಲ್ಲುವದು.

2. ಪರಂತು, ಬಂದು ಗ್ರಾಮವು ಬೇರೆಬೇರೆಯಾಗಿ ಮಂಜೂರು ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ ಡೆಪ್ಯೂಟಿ ಕಮ್ಮಿಷನರವರು ತಮ್ಮ ಯಖ್ತ್ಯಾರೀ ಮೇಲೆ ಪೂರಾ ಗ್ರಾಮವನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಬಂದು ವೃತ್ತಿಯನ್ನೂ ಬೇರೆ ಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರನು ಹರಾಜ್ ಕಾಲದಲ್ಲಿ ಕ್ರಯದ ಮೊಬಲಗ್ ಪೈಕಿ ಶೇಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗ್ ಪೈಕಿ ಬಾಕಿಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತಿ ಮಾಡದೆ ಇದ್ದರೆ, ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೇ ಹೋದರೆ, ಅಥವಾ ಬಾಕಿ ಕ್ರಯದ ಮೊಬಲಗನ್ನು ಪಾವತಿ ಮಾಡದಿದ್ದರೆ ಜಮೀನುಗಳು ಅವ್ವಲ್ ಕ್ರಯದಾರನ ಖರ್ಚಿನಲ್ಲಿ ವ ನುಕ್ಸಾನಾಗಿ ಮರಳಿ ಹರಾಜು ಹಾಕಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರೀಕ್ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ಯಸ್ಥರಿಂದ ರಜೂ ಮಾಡಲ್ಪಟ್ಟ ಬರವಣಿಗೆ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕುಂಟೆಂಬ ಯಾವ ಮನುಷ್ಯನಾಗಲಿ, ಹರಾಜು ಆಗುವದಕ್ಕೆ ಮುಂಚಿತವಾಗಿ ಬಡ್ಡಿ ಯಾ ಇತರ ಖರ್ಚುಗಳು ದೇಖೀಲ್ ಕಂದಾಯದ ಬಾಕಿ ಮೊಬಲಗನ್ನು ಪೂರಾ ಹಾಜರ್ ಮಾಡಿದಾಗ್ಯೂ ಅಥವಾ ಹಿಂದಿನ ಕಂದಾಯದ ಬಾಕಿ ಮುಂತಾದ್ದು ಪಾವತಿಯಾಗಿರುತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದಾಗ್ಯೂ ಹರಾಜ್ ಮುವ್ತುಕೂಫ್ ಮಾಡಲ್ಪಡತಕ್ಕದ್ದು.

7. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿ, ಹರಾಜು ಖಾಯಂಮಾಡಲ್ಪಟ್ಟ ಕೂಡ್ಲೆ ಗ್ರಾಮವು ಆತನ ಸುಫರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರೆಜಿಸ್ಟರ್ ಮಾಡಲ್ಪಟ್ಟು, ಡೆಪ್ಯುಟಿ ಕಮ್ಮಿಷನರವರಿಂದ ರುಜೂ ಮೊಹರ್ ಮಾಡೋಕಾದ ಬಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಶೀಲ್‌ನಲ್ಲಾಗಲಿ ಅಂದಾಜಾ ಬೀಜವರಿ ವಿಷಯದಲ್ಲಿ ಆಗಲಿ ಇರುವ ಗಲ್ಲತ್ತುಗಳಿಗೆ ಸರಕಾರದವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

8. ಪರಂತು, ಸದರೀ ಹರಾಜಿನಿಂದ ನುಕ್ಸಾನಪಟ್ಟಂತೆ ಎಣಿಸುವ ಜನಗಳು ಹರಾಜು ತಾರೀಖು ಲಾಗಾಯತು 90 ದಿನಗಳೊಳಗಾಗಿ ದಿವ್ವಾರವರಿಗೆ ಅಪ್ಪೀಲು ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಅಪ್ಪೀಲಿನಲ್ಲಿ ಆಗುವ ಆಖೈರ್ ಹುಕುಮಿಗೆ ಸದರೀ ಕ್ರಯವು ವಳಪಟ್ಟು ಯಿರುತ್ತೆ.

ತಿಪ್ಪತ್ತು	ತಾಲ್ಲೂಕು.	ಹೊಬಳ್ಳಿ.	ಗ್ರಾಮ.	ಜೋಡೀ ದಾರರ ಹೆಸರು.	ಅಂದಾಜಾ ಬೀಜವರಿ.	ಅಂದಾಜಾ ಹುಟ್ಟುವಳಿ ಯಾ ಬೇರೀಜು.	ಸಾಲಿಯಾನಾ ಸರಕಾರಕ್ಕೆ ಕೊಡಬೇಕಾದ ಕ್ವಿಟ್‌ರೆಂಟ್.	ಯಾವ ಬಾಕಿ ಗೋಸ್ಕರ ಗ್ರಾಮಗಳು ಹರಾಜ್ ಮಾಡಲ್ಪಡುತ್ತೋ ಆಂಥಾ ಸರಕಾರದ ಕಂದಾಯದ ಬಾಕಿ.	ಹರಾಜು ತಾರೀಖು ವಗೈರೆ.
					ಎಕರೆ. ಗುಂ.	ರೂ. ಆ. ಪೈ.	ರೂ. ಆ. ಪೈ.	ರೂ. ಆ. ಪೈ.	
ಬೆಂಗಳೂರು.	ಕನಕಪುರ	ಹಾರೋಹಳ್ಳಿ	ಜೋಡಿ ಶಾನಪ್ಪನಹಳ್ಳಿ	ಶ್ರೀನಿವಾಸರಾವ್ ವ್ಯಾಸರಾವ್, ಜಯರಾವ್, ಶ್ರೀನಿವಾಸಾಚಾರ್ರು ಅಂಣಯ್ಯಚಾರ್ರು ವಗೈರೆ	197 14	228 7 0	58 4 6	130 3 9 ಮತ್ತು ಹರಿಜು ತಾರೀಖು ವರಿವಿಗೆ ಆಗುವ ಬಡ್ಡಿ	7—1—91 ಅಮಲ್ದಾರ್ರು ರೂ ಬರೂ ತಾಲ್ಲೂಕು ಕಛೇರಿಯಲ್ಲಿ.
			ಜೋಡಿ ಸಾದಹಳ್ಳಿ	ಅಪ್ಪಾಜಿಪಂಡಿತ ಕೃಷ್ಣಪಂಡಿತ, ನಂಜುಂಡಪಂಡಿತ, ಧರ್ಮಮ್ಮ ವಗೈರೆ	969 16	735 12 0	277 15 9	314 3 7 ಮತ್ತು ಹರಾಜು ತಾರೀಖು ವರಿವಿಗೆ ಆಗುವ ಬಡ್ಡಿ	8—1—91 ಅಮಲ್ದಾರ್ರು ರೂ ಬರೂ ತಾಲ್ಲೂಕು ಕಛೇರಿಯಲ್ಲಿ.
			ಜೋಡಿ ದೊಡ್ಡಗೊಲ್ಲಹಳ್ಳಿ	ಬಾಬೂಚಾರ್ರು ಮಧ್ವಾಚಾರ್ರು ನರಸಿಹ್ಮಾಚಾರು ರಾಘವೇಂದ್ರಾಚಾರ್ರು ವಗೈರೆ	422 5	351 8 0	187 15 6	291 1 7 ಮತ್ತು ಹರಾಜು ತಾರೀಖು ವರಿವಿಗೆ ಆಗುವ ಬಡ್ಡಿ	9—1—91 ಅಮಲ್ದಾರ್ರು ರೂ ಬರೂ ತಾಲ್ಲೂಕು ಕಛೇರಿಯಲ್ಲಿ.
	ರಾಮನಗರ	ಕನಕಪುರ	ಜೋಡಿ ಮಾವಳೀಪುರ	ಗುರ್ರಾವ್ ಸದಾಶಿವರಾವು, ಸಾಕಮ್ಮ, ಜೆಲ್ಲಪ್ಪ ವಗೈರೇರು	743 25	460 12 0	404 12 9	984 12 9 ಮತ್ತು ಹರಾಜು ತಾರೀಖು ವರಿವಿಗೆ ಆಗುವ ಬಡ್ಡಿ ನೋಟೀಸ್ ಫಿ	6—1—91 ಅಮಲ್ದಾರ್ರು ರೂ ಬರೂ ತಾಲ್ಲೂಕು ಕಛೇರಿಯಲ್ಲಿ.

ಪರಾ.—ಜೋಡೀ ದಾರರುಗಳಿಂದಲಾಗಲಿ, ಬಾಧ್ಯತೆಯ ಮೂಲಕ ಯಿವರುಗಳಿಗೆ ಹಿಂದೆ ಯಿದ್ದವರಿಂದಾಗಲಿ ಉಂಟು ಮಾಡಲ್ಪಟ್ಟ ತಮ್ಮಾಂ ಹಿಡುವಳಿಗಳಿಗೂ ದೇಣಿಗಳಿಗೂ ಮತ್ತು ಹಕ್ಕುಗಳಿಗೂ ಅಥವಾ ಮತ್ಯಾವ ಸಂಬಂಧಗಳಿಗೂ ಸದರೀ ಹರಾಜ್ ವಳಪಟ್ಟಿರುವದಿಲ್ಲ.

ಮೇಲ್ಕಂಡ ಜೋಡೀ ಗ್ರಾಮಗಳ ಹಿಡುವಳಿಯನ್ನು ಸರಕಾರಕ್ಕೆ ಕೇರಿಸಿಕೊಂಡಿರುತ್ತೆ.

ವಿ. ಪಿ. ಮಾಧವರಾವ್,
ಡೆಪ್ಯುಟಿ ಕಮ್ಮಿಷನರ್.

ಕೋಲಾರ ಡಿಸ್ಟ್ರಿಕ್ಟು.

ತಾರೀಖು ನೇ ಮಾಹೆ ನವೆಂಬರ್ 1890.

ನಂ. 1. ಸಕಲ ಜನಗಳಿಗೂ ತಿಳಿಯುವ ಬಗ್ಯೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡಿಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಜೋಡೀದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸಮಾಧಾನಕ್ಕೋಸ್ಕರ ಕ್ರಮಪ್ರಕಾರ ಜಪ್ತೀ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡೀ ಗ್ರಾಮಗಳು ಇದರಡಿಕಂಡ ತಖ್ತೆಯಲ್ಲಿ ನಮೂದಿಸಿರುವ ಸ್ಥಳದಲ್ಲೂ ವ ತಾರೀಖಿನಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು, ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಯೆ 11 ಘಂಟೆಗೆ ಹರಾಜು ಸುರುವಾಗಿ ಉಳಿಕೆ ಯಾವದೂ ಇಲ್ಲದೆ ಗ್ರಾಮಗಳು ಚಡ ದರಖಾಸ್ತುದಾರರಿಗೆ ಹರಾಜು ನಿಲ್ಲುವದು.

2. ಪರಂತು, ಒಂದು ಗ್ರಾಮವು ಬೇರೆಬೇರೆಯಾಗಿ ಮುಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ ಡೆಪ್ಯೂಟಿ ಕಮ್ಮಿಷನರವರು ತಮ್ಮ ಯಖ್ತ್ಯಾರೀಮೇಲೆ ಪೂರಾ ಗ್ರಾಮಗಳನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಒಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರನು ಹರಾಜು ಕಾಲದಲ್ಲಿ ಕ್ರಯದ ಮೊಬಲಗ್ ಪೈಕಿ ಶೇಕಡಾ 25 ರೂಪಾಯಿ ಡಿಪಾಜಿಟ್ ಯಿಡಬೇಕಾಗಿರುತ್ತೆ. ಕ್ರಯದ ಮೊಬಲಗ್ ಪೈಕಿ ಬಾಕಿಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತಿ ಮಾಡದೆ ಯಿದ್ದರೆ ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೆ ಹೋದರೆ, ಅಥವಾ ಬಾಕಿ ಕ್ರಯದ ಮೊಬಲಗನ್ನು ಪಾವತಿ ಮಾಡದಿದ್ದರೆ ಜಮಿನುಗಳು ಅವ್ವಲ್ ಕ್ರಯದಾರನ ಖರ್ಚಿನಲ್ಲಿ ವ ನುಕ್ಸಾನಾಗಿ ಮರಳಿ ಹರಾಜು ಹಾಕಿಸಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರೀಕ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ತ್ಯಸ್ಥರಿಂದ ರುಜು ಮಾಡಲ್ಪಟ್ಟ ಬರವಣಿಗೆ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥಾವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವರ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮಿನಿನಲ್ಲಿ ತನಿಗೆ ಹಕ್ಕುಟೆಂಬ ಇತರ ಯಾವ ಮನುಷ್ಯನಾಗಲಿ, ಹರಾಜು ಆಗುವದಕ್ಕೆ ಮುಂಚಿತವಾಗಿ ಬಡ್ಡಿ ಯಾ ಇತರ ಖರ್ಚುಗಳು ದೇಖೀಲ್ ಕಂದಾಯದ ಬಾಕಿ ಮೊಬಲಗನ್ನು ಪೂರಾ ಹಾಜರ್ ಮಾಡಿದಾಗ್ಯೂ ಅಥವಾ ಹಿಂದಿನ ಕಂದಾಯದ ಬಾಕಿ ಮುಂತಾದ್ದು ಪಾವತಿಯಾಗಿರುತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದಾಗ್ಯೂ ಅಥವಾ ಮೈಸೂರು ಲ್ಯಾಂಡ್ ರೆವಿನ್ಯೂ ಕೋಡಿನ 170ನೇ ಸೆಕ್ಷನ್ ಅನುಸಾರವಾಗಿ ಜಾಮೀನ್ ಕೊಟ್ಟಾಗ್ಯೂ ಹರಾಜು ಮುವ್ಕೂಫ್ ಮಾಡಲ್ಪಡತಕ್ಕದ್ದು.

7. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿ, ಹರಾಜು ಖಾಯಂ ಮಾಡಲ್ಪಟ್ಟ ಕೂಡ್ಲೆ ಗ್ರಾಮವು ಆತನ ಸುಫರ್ದು ಮಾಡಲ್ಪಟ್ಟು ಕ್ರಯದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಡೆಪ್ಯೂಟಿ ಕಮ್ಮಿಷನರವರಿಂದ ರುಜು ಮೊಹರ್ ಮಾಡೋಣಾದ ಒಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಶೀಲಿನಲ್ಲಾಗಲಿ ಅಂದಾಜಾ ಬೀಜವರೀ ವಿಷಯದಲ್ಲಾಗಲಿ ಇರುವ ಗಲ್ಲತ್ತುಗಳಿಗೆ ಸರಕಾರದವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

8. ಪರಂತು ಸದರೀ ಹರಾಜಿನಿಂದ ನುಕ್ಸಾನಪಟ್ಟಂತೆ ಯಿಣಿಸುವ ಜನಗಳು ಹರಾಜು ತಾರೀಖು ಲಾಗಾಯತು 90 ದಿನಗಳೊಳಗಾಗಿ ಧಿರ್ವಾರವರಿಗೆ ಅಪ್ಪೀಲ್ ಮಾಡಿ ಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಅಪ್ಪೀಲ್‌ನಲ್ಲಿ ಆಗುವ ಆಖೈರ್ ಹುಕುಮಿಗೆ ಸದರೀ ಕ್ರಯವು ಒಳಪಟ್ಟು ಯಿರುತ್ತೆ.

ಡಿಸ್ಟ್ರಿಕ್ಟು.	ತಾಲ್ಲೂಕು.	ಜೋಡಿ.	ಗ್ರಾಮ.	ಜೋಡೀದಾರರ ಹೆಸರು.	ಅಂದಾಜಾ ಬೀಜವರಿ.	ಅಂದಾಜಾ ಹುಟ್ಟುವಳಿ ಯಾ ಬೇರೀಜು.	ಸಾಲಿಯಾನಾ ಸರಕಾರಕ್ಕೆ ಕೊಡಬೇಕಾದ ಕ್ವಿಟ್‌ರೆಂಟ್.	ಯಾವ ಬಾಕಿಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಡುತ್ತೋ ಅಂಥಾ ಸರ್ಕಾರದ ಕಂದಾಯದ ಬಾಕಿ.	ಹರಾಜ್ ತಾರೀಖು ವಗೈರೆ.
					ಯೆ. ಗುಂ. ಗ.	ರೂ. ಆ. ಪೈ.	ರೂ. ಆ. ಪೈ.	ರೂ. ಆ. ಪೈ.	
ಕೋಲಾರ.	ಬಂಗಾರಪೇಟೆ	ಬೂದಿಕೋಟೆ	ಚಂಪನಹಳ್ಳಿ ಜೋಡಿಗ್ರಾಮ.	ವೆಂಕಟರಾಮಾಶಾಸ್ತ್ರಿ ಮತ್ತು ಕೃಷ್ಣಶಾಸ್ತ್ರಿ	52 20 0	90 0 0	71 1 0	354 4 0	ತಾಲ್ಲೂಕು ಕಚೇರಿಯಲ್ಲಿ ಆಮಲ್ದಾರ್ ರವರಿಗೂ 91ನೇ ಜನವರೀ ತಾರೀಖು 15ರಲ್ಲಿ ಹರಾಜು ತಾರೀಖಿನವರಿಗೆ ಬಡ್ಡಿ ಸಹ ಕೊಡಬೇಕು
		ಹೊಸಕೋಟೆ	ವಾದಂಡಹಳ್ಳಿ ಜೋಡಿಗ್ರಾಮ.	ಕೃಷ್ಣಾಚಾರ್ಯರು	340 0 0	260 0 0	179 10 10	1192 8 1	ಡಿಟೋ 16ರಲ್ಲಿ ಡಿಟೋ
		ಬಂಗಾರಪೇಟೆ	ನಾಗನಾಥಪುರ ಜೋಡಿಗ್ರಾಮ.	ವರದರಾಜಯ್ಯಂಗಾರ್ ಮತ್ತು ಸುಬ್ಬಾಭಟ್ಟ	ಖು. ಕೂ. ಪ. 13 19 8	100 0 0	29 11 0	76 0 11	ಡಿಟೋ 17ರಲ್ಲಿ

ಸೂಚನೆ.—ಜೋಡೀದಾರರುಗಳಿಂದಲಾಗಲಿ ಬಾಧ್ಯತೆ ಮೂಲಕ ಇವರುಗಳಿಗೆ ಹಿಂದೆ ಯಿಚ್ಚವರಿಂದ ಆಗಲಿ ಮಾಡಲ್ಪಟ್ಟ ತಕರಾರು ಹಿಡುವಳಿಗಾಗಲಿ ದೇಣಿಗೆಗಳಿಗಾಗಲಿ ಮತ್ತು ಹಕ್ಕುಗಳಿಗಾಗಲಿ ಅಥವಾ ಮತ್ಯಾವ ಸಂಬಂಧಗಳಿಗಾಗಲಿ ಸದರೀ ಹರಾಜು ವಳಪಟ್ಟಿರುವದಿಲ್ಲ.

ಸಿ. ಮಾಯ್ಯಯ್ಯ, ಡೆಪ್ಯೂಟಿ ಕಮ್ಮಿಷನರ್.